ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 12-05-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಜನ–ಮನ ಸರ್ಕಾರದಿಂದ ಜನಾಭಿಪ್ರಾಯ ಸಮಾವೇಶ:<br><br>ಉಪಸ್ಥಿತಿ:<br><br>ಸಿದ್ದರಾಮಯ್ಯ, ಮುಖ್ಯಮಂತ್ರಿಗಳು,<br><br>ಪ್ರಾಸ್ತಾವಿಕ ನುಡಿ:<br><br>ಆರ್. ರೋಷನ್ ಬೇಗ್, ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು.<br><br>ಪಾಲ್ಗೊಳ್ಳುವವರು:<br><br>ರಾಜ್ಯ ಸಚಿವ ಸಂಪುಟದ ಎಲ್ಲ ಸಚಿವರು<br><br>ಜನಾಭಿಪ್ರಾಯ ಮಂಡನೆ:<br><br>ರಾಜ್ಯ ಸರ್ಕಾರದ ವಿವಿಧ ಯೋಜನೆ ಫಲಾನುಭವಿಗಳು ಹಾಗೂ ಸಮಾಜ ಚಿಂತಕರು\<br><br>ವಿಶೇಷ ಸೂಚನೆ:<br><br>ಮೇಲ್ಕಂಡ ಸಮಾರಂಭಕ್ಕೆ ಮಾಧ್ಯಮ ಪ್ರತಿನಿಧಿಗಳು ತಲುಪಲು ವಾರ್ತಾಸೌಧದಿಂದ ಮಧ್ಯಾಹ್ನ 2-30 ಗಂಟೆಗೆ ಮಾಧ್ಯಮ ಪ್ರತಿನಿಧಿಗಳಿಗೆ ವಾಹನ ವ್ಯವಸ್ಥೆ ಮಾಡಲಾಗಿದೆ.<br><br>ಸಂಪರ್ಕ:<br><br>ಶ್ರೀಮತಿ ಪಿ.ಎಸ್. ಇಂದಿರಮ್ಮ, ಮೊ.ನಂ. 9481031499 | 13-05-2016<br>ಶುಕ್ರವಾರ<br>ಸಂಜೆ<br>4-00 ಗಂಟೆಗೆ | ಡಾ. ಬಾಬುರಾಜೇಂದ್ರ ಪ್ರಸಾದ್ ಅಂತರ ರಾಷ್ಟ್ರೀಯ ಸಮಾವೇಶ ಭವನ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ, ಜಿ.ಕೆ.ವಿ.ಕೆ. ಬೆಂಗಳೂರು. |

| | | | |
|---|---|---|---|
| 2. | ಜೀತ ಪದ್ಧತಿ ನಿರ್ಮೂಲನೆ– ಒಂದು ದಿನ ಕಾರ್ಯಾಗಾರ:<br><br>ಉದ್ಘಾಟನಾ ಭಾಷಣ:<br><br>ಡಾ. ಸಂಜಯ್ ಧುಬೆ,<br>ನಿರ್ದೇಶಕರು,<br>ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ<br><br>ಭಾಷಣ:<br><br>ರಾಜ್ಯದ ಮುಖ್ಯ ಕಾರ್ಯದರ್ಶಿಗಳು | 13–05–2016<br>ಶುಕ್ರವಾರ<br>ಬೆಳಿಗ್ಗೆ<br>10–00 ಗಂಟೆಗೆ | ಕೊಠಡಿ ಸಂಖ್ಯೆ 419,<br>ನಾಲ್ಕನೇ ಮಹಡಿ, ವಿಕಾಸಸೌಧ,<br>ಡಾ.ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು. |
| 3. | ದೇವನಹಳ್ಳಿ ಬೀರಸಂದ್ರ ಗ್ರಾಮದಲ್ಲಿ 43 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಚೇರಿಗಳ ಬೃಹತ್ ಸಂಕೀರ್ಣಕ್ಕೆ ಶಂಕುಸ್ಥಾಪನೆ.<br><br>ಶಂಕುಸ್ಥಾಪನೆ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು<br><br>ವಿಶೇಷ ಸೂಚನೆ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ಬೆಂಗಳೂರು ವಾರ್ತಾಸೌಧದಿಂದ ಬೆಳಿಗ್ಗೆ 9–00 ವಾಹನ ವ್ಯವಸ್ಥೆ ಮಾಡಲಾಗಿದೆ.<br><br>ಸಂಪರ್ಕ<br><br>ದೇವರಾಜಯ್ಯ,<br>ಮೊ. ಸಂಖ್ಯೆ: 9480841249 | 13–05–2016<br>ಶುಕ್ರವಾರ<br>ಬೆಳಿಗ್ಗೆ<br>11–00 ಗಂಟೆಗೆ | ಬೀರಸಂದ್ರ ಗ್ರಾಮ,<br>ದೇವನಹಳ್ಳಿ ತಾಲ್ಲೂಕು,<br>ಬೆಂಗಳೂರು ಗ್ರಾಮಾಂತರ ಜಿಲ್ಲೆ. |
| 4. | ಪತ್ರಿಕಾಗೋಷ್ಠಿ:<br><br>ಪರಮೇಶ್ವರ್ ನಾಯ್ಕ್,<br>ಕಾರ್ಮಿಕ ಸಚಿವರು. | 13–05–2016<br>ಶುಕ್ರವಾರ<br>ಅಪರಾಹ್ನ<br>12–00 ಗಂಟೆಗೆ | ಕೊಠಡಿ ಸಂಖ್ಯೆ 334,<br>ಸಮ್ಮೇಳನ ಸಭಾಂಗಣ,<br>ಮೂರನೇ ಮಹಡಿ,<br>ವಿಧಾನಸೌಧ,<br>ಬೆಂಗಳೂರು. |

ನಿರ್ದೇಶಕರ ಪರವಾಗಿ.

# ಪತ್ರಿಕಾ ಪ್ರಕಟಣೆ

# ಜೀತ ಪದ್ಧತಿ ನಿರ್ಮೂಲನೆ ಕುರಿತು ಕಾರ್ಯಾಗಾರ

**ಬೆಂಗಳೂರು, ಮೇ 12 (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗವು ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಶ್ರಯದಲ್ಲಿ 'ಜೀತ ಪದ್ದತಿ ನಿರ್ಮೂಲನೆ' ಕುರಿತು ಒಂದು ದಿನದ ಕಾರ್ಯಾಗಾರವನ್ನು ಮೇ 13- ಶುಕ್ರವಾರದಂದು ಬೆಂಗಳೂರಿನಲ್ಲಿ ಆಯೋಜಿಸಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ವಿಕಾಸಸೌಧದ 4 ನೇ ಮಹಡಿಯ ಕೊಠಡಿ ಸಂಖ್ಯೆ 419 ರಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಸದಸ್ಯರಾದ ಶ್ರೀ ಮುರುಗೇಶನ್ ರವರು ಕಾರ್ಯಾಗಾರವನ್ನು ಉದ್ಘಾಟಿಸಲಿದ್ದಾರೆ. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರಾದ ಎಚ್ ಕೆ ಪಾಟೀಲ್ ಮತ್ತು ಕಾರ್ಮಿಕ ಸಚಿವರಾದ ಟಿ ಪರಮೇಶ್ವರ್ ನಾಯಕ್ ರವರುಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಜೀತ ಪದ್ಧತಿ ನಿರ್ಮೂಲನೆ ಕುರಿತು ತಜ್ಞರು, ಉಪನ್ಯಾಸ ನೀಡಲಿದ್ದು ಕಾರ್ಯಾಗಾರದಲ್ಲಿ ಆಯ್ದ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಉಪವಿಭಾಗಾಧಿಕಾರಿಗಳು, ಸಮಾಜ ಕಲ್ಯಾಣ, ಕಾರ್ಮಿಕ, ಗೃಹ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿರ್ದೇಶಕ ಕೃಷ್ಣಪ್ಪ ಎನ್ ಕೋಡಿಪಾಳ್ಯರವರು ತಿಳಿಸಿದ್ದಾರೆ.

ಬಾಬು/ಕೆಎಂ

# ದಾದಿಯರ ವೇತನ ಹೆಚ್ಚಳಕ್ಕೆ ಸರ್ಕಾರದ ಕ್ರಮ

**ಬೆಂಗಳೂರು, ಮೇ 12 (ಕರ್ನಾಟಕ ವಾರ್ತೆ)**

ದಾದಿಯರ ವೇತನವನ್ನು ಹದಿಮೂರು ಸಾವಿರಕ್ಕೆ ಹೆಚ್ಚಿಸಲಾಗುತ್ತಿದೆ ಎಂದು ಆರೋಗ್ಯ ಸಚಿವ ಯು. ಟಿ. ಖಾದರ್ ಅವರು ತಿಳಿಸಿದರು. ಅವರು ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಂಗ್ಲೋ ಇಂಡಿಯನ್ ಯುನಿಟಿ ಸೆಂಟರ್ ರಿ., ನ ಸಹಯೋಗದೊಂದಿಗೆ ನಡೆದ 16ನೇ ಕರ್ನಾಟಕ ರಾಜ್ಯ ಮಟ್ಟದ ಫ್ಲೋರೆನ್ಸ್ ನೈಟಿಂಗೇಲ್ ದಾದಿಯರ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಸೇವೆಯಲ್ಲಿರುವ ವೈದ್ಯರಿಗಾಗಲೀ ದಾದಿಯರಿಗಾಗಲೀ ಆರೋಗ್ಯ ಇಲಾಖೆಯ ಅಧಿಕಾರಿಗಳಾಗಲಿ ಸಿಬ್ಬಂದಿಗಳಾಗಲಿ ಯಾವುದೇ ರೀತಿಯ ಕಿರುಕುಳ ನೀಡಿದಲ್ಲಿ ಅಥವಾ ಅವರಿಗೆ ಸಂದಬೇಕಾದ ಸವಲತ್ತುಗಳನ್ನು ನೀಡದಿದ್ದಲ್ಲಿ, ಲಂಚ ಕೇಳಿದರೆ ನೇರವಾಗಿ ಸಚಿವರ ಗಮನಕ್ಕೆ ತಂದು ದೂರು ನೀಡಿ, ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದು ಸಚಿವರು ಹೇಳಿದರು.

ಸರ್ಕಾರ ಬಿ.ಎಸ್.ಸಿ. ನರ್ಸಿಂಗ್ ಕಾಲೇಜನ್ನು ತೆರೆಯಲು ಉದ್ದೇಶಿಸಿದೆ. ಪ್ರತಿಯೊಬ್ಬ ದಾದಿಯು ಕರ್ನಾಟಕದಲ್ಲಿ ಅವರ ಸೇವೆಗೆ ಅಗತ್ಯವಾಗಿರುವ ಕನ್ನಡವನ್ನು ಕಡ್ಡಾಯವಾಗಿ ಕಲಿಯಬೇಕು ದಾದಿಯರ ಸೇವೆ ಅತ್ಯಮೂಲ್ಯವಾಗಿದ್ದು, ಅವರು ನಿಸ್ವಾರ್ಥತೆಯಿಂದ, ಮಾನವೀಯತೆಯಿಂದ ರೋಗಿಗಳಿಗೆ

ಸ್ಪಂದಿಸಬೇಕು, ಸಾಮಾಜಿಕ ಕಳಕಳಿ ಹೊಂದಿರಬೇಕು. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ದಾದಿಯರ ಸೇವೆ ಅಗತ್ಯ ಒತ್ತಡದ ಬದುಕಿನಲ್ಲಿ ದಾದಿಯರ ಸೇವೆ ಅಗತ್ಯವಾಗಿದೆ ಎಂದರು.

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ 10 ಜನ ದಾದಿಯರು ಹಾಗೂ 2015 ನೇ ಸಾಲಿನ ಬಿ.ಎಸ್.ಸಿ. ನರ್ಸಿಂಗ್ ನಲ್ಲಿ ಮೊದಲ ರ್‍ಯಾಂಕ್ ಪಡೆದು ಚಿನ್ನದ ಪದಕ ಪಡೆದ ಇಬ್ಬರು ವಿಜೇತರನ್ನು ಪ್ರಶಸ್ತಿ ನೀಡಿ ಗೌರವಿಸಿದರು. ಆರೋಗ್ಯ ಇಲಾಖೆಯ ವೈದ್ಯ ಹಾಗೂ ನರ್ಸ್ ಸೇವೆಯಲ್ಲಿರುವವರು ಮುಂಬಡ್ತಿ ಮತ್ತಿತರ ತೊಂದರೆಗಳನ್ನು ಎದುರಿಸುತ್ತಿರುವುದು ಗಮನಕ್ಕೆ ಬಂದಿದೆ. ಸರ್ಕಾರ ಹಾಗೂ ಇಲಾಖೆ ಅವರ ಬೇಡಿಕೆಗಳನ್ನು ಈಡೇರಿಸಲು ಹಾಗೂ ಎಲ್ಲಾ ಕುಂದುಕೊರತೆಗಳ ನಿವಾರಣೆಗೆ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತದೆ ಎಂದರು. ಪ್ರತಿವರ್ಷ ರಾಜ್ಯ ಹಾಗೂ ಜಿಲ್ಲಾ ಮಟ್ಟವೂ ಸೇರಿದಂತೆ ಫ್ಲೋರೆನ್ಸ್ ನೈಟಿಂಗೇಲ್ ದಾದಿಗಳ ಪ್ರಶಸ್ತಿ ದಿನವನ್ನು ಸರ್ಕಾರದ ಅಧಿಕೃತ ಕಾರ್ಯಕ್ರಮವಾಗಿ ಆಚರಿಸುವ ಬಗ್ಗೆ ಗಮನಹರಿಸಲಾಗುವುದು ಎಂದರು.

ಆರೋಗ್ಯ ಮತ್ತು ಕುಟುಂಬ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಡಾ॥ ಶಾಲಿನಿ ರಜನೀಶ್ ಸ್ವಾಗತಿಸಿದರು. _ಐವಾನ್ ನಿಗ್ಲಿ ಮಾತನಾಡಿ, 16ನೇ ಕರ್ನಾಟಕ ರಾಜ್ಯ ಮಟ್ಟದ ಫ್ಲೋರೆನ್ಸ್ ನೈಟಿಂಗೇಲ್ ದಾದಿಗಳ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಸರ್ಕಾರದಿಂದ ಎಲ್ಲಾ ರೀತಿಯ ಸಹಕಾರ ದೊರೆತದ್ದು ಸಂತೋಷ ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕರಾದ ಡಾ॥ ವಿಮಲ ಅವರು, ಆಂಗ್ಲೋ ಇಂಡಿಯನ್ ನಾಮಿನೇಟೆಡ್ ಎಂ.ಎಲ್.ಎ ವಿನಿಷಾ ನಿರೋ ಮತ್ತಿತರರು ಉಪಸ್ಥಿತರಿದ್ದರು. ಆಂಗ್ಲೋ ಇಂಡಿಯನ್ ಯುನಿಟಿ ಸೆಂಟರ್ ನ ಅಧ್ಯಕ್ಷರಾದ ಅರ್ಲ್ ನೌರೆಸ್ ಅವರು ವಂದನಾರ್ಪಣೆ ಮಾಡಿದರು.

ಬಾಬು/ಇಂದು/ಕೆಎಂ

# ನಾಳೆ ಸರ್ಕಾರದಿಂದ 'ಜನಮನ': ಜನಾಭಿಪ್ರಾಯ ಸಂಗ್ರಹ

**ಬೆಂಗಳೂರು, ಮೇ 12 (ಕರ್ನಾಟಕ ವಾರ್ತೆ)**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ರಾಜ್ಯ ಸರ್ಕಾರ ಮೂರು ವರ್ಷಗಳ ಅಧಿಕಾರ ಪೂರ್ಣಗೊಳಿಸಿದ ಹಿನ್ನಲೆಯಲ್ಲಿ ನಾಳೆ (ಮೇ 13ರಂದು) 'ಜನಮನ' ಜನಾಭಿಪ್ರಾಯ ಸಮಾವೇಶ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ಜಾರಿಗೊಳಿಸಿದ ಯೋಜನೆಗಳ ಪ್ರಗತಿ ಮತ್ತು ನ್ಯೂನತೆಗಳ ಬಗ್ಗೆ ಫಲಾನುಭವಿಗಳಿಂದ ನೇರ ಮಾಹಿತಿ ಪಡೆದು ಯೋಜನೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪ್ರಯತ್ನಿಸಲಾಗುವುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಚಿವ ಆರ್. ರೋಷನ್‌ಬೇಗ್ ಅವರು ತಿಳಿಸಿದರು.

ಬೆಂಗಳೂರು ವಾರ್ತಾ ಸೌಧದಲ್ಲಿ ಇಂದು ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ನಗರದ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿಕೆವಿಕೆ) ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಮಾವೇಶ ಭವನದಲ್ಲಿ ಸಂಜೆ 4 ಗಂಟೆಗೆ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ರಾಜ್ಯದ ಎಲ್ಲ ಜಿಲ್ಲೆಗಳಿಂದ ಫಲಾನುಭವಿಗಳು ಆಗಮಿಸಿ ಮುಖ್ಯಮಂತ್ರಿಗಳೊಂದಿಗೆ ತಮ್ಮ ಅನುಭವ, ಅಭಿಪ್ರಾಯ ಹಂಚಿಕೊಳ್ಳಲಿದ್ದಾರೆ ಎಂದರು.

ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚಿಸಿ ಫಲಾನುಭವಿಗಳನ್ನು ಆಯ್ಕೆಮಾಡಲಾಗಿದ್ದು, ಫಲಾನುಭವಿಗಳು ತಮಗೆ ದೊರೆತ ಸವಲತ್ತುಗಳ ಬಗ್ಗೆ, ತಮಗೆ ಆದಂತಹ ಅನುಕೂಲಗಳ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ನೇರ ಸಂವಾದ ನಡೆಸುವ ಮೂಲಕ ತಮ್ಮ ಅನಿಸಿಕೆಗಳನ್ನು ವ್ಯಕ್ತಗೊಳಿಸುವರು ಎಂದರು.

ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಹಾಗೂ ಸಚಿವ ಸಂಪುಟದ ಎಲ್ಲಾ ಸಚಿವರು ಭಾಗವಹಿಸಲಿದ್ದು, ರಾಜ್ಯದ ಎಲ್ಲ ಜಿಲ್ಲೆಗಳಿಂದ 600ಕ್ಕೂ ಹೆಚ್ಚಿನ ಫಲಾನುಭವಿಗಳು ಆಗಮಿಸಿ ತಮ್ಮ ಅಭಿಪ್ರಾಯವನ್ನು ಸರ್ಕಾರಕ್ಕೆ ತಿಳಿಸಲಿದ್ದಾರೆ ಎಂದು ಸಚಿವರು, ಮುಂಬರುವ ದಿನಗಳಲ್ಲಿ ಆಯಾ ಜಿಲ್ಲೆಗಳ ಉಸ್ತುವಾರಿ ಸಚಿವರುಗಳ ನೇತೃತ್ವದಲ್ಲಿ ಜಿಲ್ಲೆಗಳಲ್ಲೂ ಸಹ 'ಜನಮನ' ಕಾರ್ಯಕ್ರಮ ನಡೆಯಲಿದ್ದು, ಜನರಿಂದ ವ್ಯಕ್ತವಾಗುವ ಅಭಿಪ್ರಾಯಗಳನ್ನು ಸಚಿವರುಗಳು ಸರ್ಕಾರಕ್ಕೆ ತಿಳಿಸಲಿದ್ದಾರೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀ ಎಸ್.ಆರ್.ಉಮಾಶಂಕರ್ ಅವರು ಮಾತನ್ನಾಡಿ,ರಾಜ್ಯ ಸರ್ಕಾರದ ವತಿಯಿಂದ ವಿವಿಧ ಕಾರ್ಯಕ್ರಮಗಳನ್ನು ಈಗಾಗಲೇ ಜಾರಿಗೊಳಿಸಲಾಗಿದ್ದು, ಈ ಕಾರ್ಯಕ್ರಮಗಳನ್ನು ಯಾವ ರೀತಿ ಉತ್ತಮಪಡಿಸಲು ಸಾಧ್ಯ ಎಂಬುದರ ಬಗ್ಗೆ ಫಲಾನುಭವಿಗಳಿಂಲೇ ಅವರ ಅನುಭವದ ಆಧಾರದ ಮೇರೆಗೆ ಮಾಹಿತಿ ಪಡೆದು ಯೋಜನೆಗಳನ್ನು ಇನ್ನಷ್ಟು ಉತ್ತಮಪಡಿಸಲಾಗುವುದು ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್.ವಿಶುಕುಮಾರ್, ಜಂಟಿ ನಿರ್ದೇಶಕ ರವಿಕುಮಾರ್, ಪಿ.ಎನ್. ಗುರುಮೂರ್ತಿ ಹಿರಿಯ ಉಪ ನಿರ್ದೇಶಕರುಗಳಾದ ಹೆಚ್. ಬಿ.ದಿನೇಶ್, ಡಿ. ಪಿ. ಮುರಳೀಧರ್ ಅವರುಗಳು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಡಿಪಿಎಂ/ಮಮತ

# ಜನ–ಮನ

## ಸರ್ಕಾರದಿಂದ ಜನಾಭಿಪ್ರಾಯ ಸಮಾವೇಶ

**ಬೆಂಗಳೂರು, ಮೇ 12 (ಕರ್ನಾಟಕ ವಾರ್ತೆ)**

ಪ್ರಸಕ್ತ ಸರ್ಕಾರವು ಅಭಿವೃದ್ಧಿ ಕಾರ್ಯಗಳ ಯಶಸ್ಸಿನ ಹಾದಿಯಲ್ಲಿ 3 ವರ್ಷಗಳನ್ನು ಪೂರ್ಣಗೊಳಿಸುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಮೇ 13 ರ ಶುಕ್ರವಾರ ಸಂಜೆ 4-00 ಗಂಟೆಗೆ ಬೆಂಗಳೂರಿನ ಬಳ್ಳಾರಿ ರಸ್ತೆಯಲ್ಲಿರುವ ಗಾಂಧೀ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ.) ದಲ್ಲಿರುವ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರ ರಾಷ್ಟ್ರೀಯ ಸಮಾವೇಶ ಭವನದಲ್ಲಿ "ಜನ-ಮನ" ಸರ್ಕಾರದಿಂದ ಜನಾಭಿಪ್ರಾಯ ಸಮಾವೇಶವನ್ನು ಹಮ್ಮಿಕೊಂಡಿದೆ.

ಪ್ರಸಕ್ತ ಸರ್ಕಾರವು ಅಧಿಕಾರಕ್ಕೆ ಬಂದ ಪ್ರಥಮ ದಿನವೇ ಘೋಷಣೆ ಮಾಡಿದ ಜನಪರ ಕಾರ್ಯಕ್ರಮಗಳನ್ನು ಪ್ರಥಮ ವರ್ಷವೇ ಅನುಷ್ಠಾನಗೊಳಿಸಿದ ಹೆಗ್ಗಳಿಕೆ ಹೊಂದಿದೆ. ಮೂರು ವರ್ಷಗಳ ಯಶಸ್ವಿ ಆಡಳಿತ ಪೂರೈಸಿ ನಾಲ್ಕನೇ ವರ್ಷದ ಹೊಸ್ತಿಲಿನಲ್ಲಿ ನಿಂತಿರುವ ಈ ಸುಸಂದರ್ಭದಲ್ಲಿ ಸರ್ಕಾರದ ಕಳೆದ ಮೂರು ವರ್ಷಗಳ ಕಾರ್ಯಕ್ರಮಗಳನ್ನು ಜನತೆಯ ಸಮ್ಮುಖದಲ್ಲಿ ಅವಲೋಕಿಸುವುದು, ಜನಾಭಿಪ್ರಾಯ ಪಡೆಯುವುದು ಈ ಜನಮನ-ಜನಾಭಿಪ್ರಾಯ ಸಮಾವೇಶದ ಆಶಯ. ಅನ್ನಭಾಗ್ಯ, ಕ್ಷೀರಭಾಗ್ಯ, ಋಣಮುಕ್ತಿ, ವಸತಿ ಭಾಗ್ಯ, ಆರೋಗ್ಯ ಭಾಗ್ಯಗಳಂತಹ ಪ್ರಮುಖ ಯೋಜನೆಗಳಲ್ಲದೆ ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ, ಕೈಗಾರಿಕೆ, ಸಮಾಜ ಕಲ್ಯಾಣ, ಆರೋಗ್ಯ ಕ್ಷೇತ್ರಗಳಲ್ಲಿ ಹಲವಾರು ಜನೋಪಯೋಗಿ ಕಾರ್ಯಕ್ರಮಗಳನ್ನು ಸರ್ಕಾರ ಬದ್ಧತೆಯಿಂದ ಜಾರಿಗೊಳಿಸಿದೆ.

ಅನ್ನಭಾಗ್ಯ, ಕ್ಷೀರಭಾಗ್ಯ ಕೇವಲ ಸಾಧಾರಣ ಸರ್ಕಾರಿ ಯೋಜನೆಗಳಲ್ಲ. ಅನ್ನಭಾಗ್ಯ-ಬರಗಾಲದ ಸಂಕಷ್ಟ ಪರಿಸ್ಥಿತಿಯಲ್ಲಿಯೂ ಬಡಜನರನ್ನು ಹಸಿವಿನಿಂದ ಮುಕ್ತಗೊಳಿಸಿ ರಕ್ಷಿಸಿದ ಯೋಜನೆ. ಅಂತೆಯೇ, ಕ್ಷೀರಭಾಗ್ಯ ಕೂಡ ನಮ್ಮ ಶಾಲಾ ಮಕ್ಕಳನ್ನು ಅಪೌಷ್ಠಿಕತೆಯಿಂದ ಕಾಪಾಡಿ ಪೌಷ್ಠಿಕರವಾಗಿರಿಸಿದೆ. ಈ ಎರಡೂ ಯೋಜನೆಗಳು ರಾಜ್ಯದ ಬಡಜನತೆಯನ್ನು ಬರಗಾಲದ ತೀವ್ರತೆಯಿಂದ ಪಾರು ಮಾಡಿದ್ದು, ಸರ್ಕಾರದ ದೂರಗಾಮಿ ಹಾಗೂ ಶಾಶ್ವತ ಪರಿಹಾರದ ಯೋಜನೆಗಳಾಗಿ ಸಾಕ್ಷೀಕೃತಗೊಂಡಿವೆ.

ಜನಮನ – ಜನಾಭಿಪ್ರಾಯ ಸಮಾವೇಶ ಸರ್ಕಾರದ ಸಾಧನೆ ಮತ್ತು ಅದರ ಯೋಜನೆಗಳ ಅನುಷ್ಠಾನದಲ್ಲಿ ಆಗಿರುವ ಪ್ರಗತಿ ಹಾಗೂ ನ್ಯೂನತೆಗಳನ್ನು ಓರೆಗಲ್ಲಿಗೆ ಹಚ್ಚುವ ಪ್ರಯತ್ನ. ಇಲ್ಲಿ ವ್ಯಕ್ತವಾಗುವ ಅಭಿಪ್ರಾಯಗಳು ಆಡಳಿತ ಯಂತ್ರಕ್ಕೆ ಮಾರ್ಗದರ್ಶಿ ಸೂತ್ರಗಳಾಗಲಿವೆ.

ಈ ಸಮಾವೇಶಕ್ಕೆ ವಿಶೇಷ ಆಹ್ವಾನಿತರಾಗಿ ರಾಜ್ಯದ ಎಲ್ಲ ಜಿಲ್ಲೆಗಳಿಂದ ವಿವಿಧ ಯೋಜನೆಗಳ ಫಲಾನುಭವಿಗಳು ಆಗಮಿಸಿ. ಮಾನ್ಯ ಮುಖ್ಯಮಂತ್ರಿಗಳೊಂದಿಗೆ ತಮ್ಮ ಅಭಿಪ್ರಾಯವನ್ನು ಹಂಚಿಕೊಳ್ಳಲಿದ್ದಾರೆ. ಸಮಾಜದ ವಿವಿಧ ಸ್ಥರಗಳ ಜನಸಾಮಾನ್ಯರು, ಗಣ್ಯರ ಅಭಿಪ್ರಾಯಗಳನ್ನು ಮಾನ್ಯ ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಹಂಚಿಕೊಳ್ಳಲಾಗುವುದು. ಮಾನ್ಯ ಮೂಲಭೂತ ಸೌಲಭ್ಯ ಹಾಗೂ ವಾರ್ತಾ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ಸಮಾರಂಭದಲ್ಲಿ ಪ್ರಾಸ್ತಾವಿಕ ಭಾಷಣ ಮಾಡಲಿದ್ದಾರೆ. ಜನ–ಮನ ಜನಾಭಿಪ್ರಾಯ ಸಮಾವೇಶದಲ್ಲಿ ರಾಜ್ಯ ಸಚಿವ ಸಂಪುಟ ಸದಸ್ಯರುಗಳು ಭಾಗವಹಿಸಲಿದ್ದಾರೆ.

ಜನಾಭಿಪ್ರಾಯ ಮಂಡನೆಯ ಈ ಕಾರ್ಯಕ್ರಮದಲ್ಲಿ ಅನ್ನಭಾಗ್ಯ, ಕ್ಷೀರಭಾಗ್ಯ, ಕ್ಷೀರಧಾರೆ, ವಿದ್ಯಾಸಿರಿ, ನಮ್ಮ ಮೆಟ್ರೋ, ಕೃಷಿಭಾಗ್ಯ, ರಾಜೀವ್ ಆರೋಗ್ಯ ಭಾಗ್ಯ, ಶುದ್ಧನೀರು, ಋಣಮುಕ್ತ, ಮನಸ್ವಿನಿ, ಮೈತ್ರಿ, ನಿರ್ಮಲ ಭಾಗ್ಯ ಯೋಜನೆಯ ಫಲಾನುಭವಿಗಳು ಪಾಲ್ಗೊಳ್ಳುವರು.

ಡಿಪಿಎಂ/ಬಾಬು/ಕೆಎಂ

## ಮೇ 13 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಚೇರಿಗಳ ಸಂಕೀರ್ಣಕ್ಕೆ ಮುಖ್ಯ ಮಂತ್ರಿಗಳಿಂದ ಶಂಕು ಸ್ಥಾಪನೆ

ಬೆಂ. ಗ್ರಾ. ಜಿಲ್ಲೆ. ಮೇ: 12 (ಕರ್ನಾಟಕ ವಾರ್ತೆ): ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜನರ ಬಹುದಿನಗಳ ಕನಸು ನನಸಾಗುವ ಕಾಲ ಕೂಡಿ ಬಂದಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಹೊಸಕೋಟೆ, ದೇವನಹಳ್ಳಿ, ದೊಡ್ಡಬಳ್ಳಾಪುರ ಹಾಗೂ ನೆಲಮಂಗಲ ತಾಲ್ಲೂಕುಗಳು ಸೇರಿವೆಯಾದರು ಜಿಲ್ಲೆಗೆ ಸಂಬಂಧಪಟ್ಟ ಕಛೇರಿಗಳೆಲ್ಲವು ಬೆಂಗಳೂರು ನಗರದಲ್ಲಿ ಕೇಂದ್ರಿಕೃತವಾಗಿವೆ.

ಅದರಲ್ಲು ಒಂದೊಂದು ಕಚೇರಿ ಒಂದೊಂದು ದಿಕ್ಕಿನಲ್ಲಿದ್ದು, ಕಚೇರಿಗಳನ್ನು ಗುರುತಿಸುವುದು ಜನ ಸಾಮಾನ್ಯರಿಗಂತು ಕಷ್ಟಸಾಧ್ಯದ ಮಾತು. ಈ ಎಲ್ಲಾ ಸಂಕಷ್ಟಗಳನ್ನು ನಿವಾರಿಸಿ ಜನ ಸಾಮಾನ್ಯರಿಗೆ ಸುಲಭದಲ್ಲಿ ಸಕಾಲದಲ್ಲಿ ಕೆಲಸ ಕಾರ್ಯಗಳಾಗುವಂತೆ ಹಾಗೂ ಸರ್ಕಾರದ ಸೇವೆಯನ್ನು ಕಲ್ಪಿಸಿಕೊಡುವ ದೃಷ್ಟಿಯಿಂದ ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಸಮೀಪ ಅಂದರೆ ದೇವನಹಳ್ಳಿಯಿಂದ ದಾಬಸ್‌ಪೇಟೆ ಕಡೆ ಹಾದು ಹೋಗುವ ಎನ್.ಹೆಚ್.207 ರಸ್ತೆ ಪಕ್ಕದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಪಟ್ಟ ಎಲ್ಲಾ ಕಛೇರಿಗಳನ್ನು ಒಂದೇ ಸೂರಿನಡಿ ತರುವ ಸದುದ್ದೇಶದಲ್ಲಿ ಬೃಹತ್ ಜಿಲ್ಲಾ ಕಛೇರಿಗಳ ಸಂಕೀರ್ಣ ನಿರ್ಮಿಸಲು ಅಗತ್ಯ ಸಿದ್ದತೆ ಕೈಗೊಳ್ಳಲಾಗಿದೆ.

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ, ಸಹಯೋಗದಲ್ಲಿ ಮೇ 13 ರಂದು ಬೆಳಗ್ಗೆ 11.00 ಗಂಟೆಗೆ, ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದಲ್ಲಿ 43 ಕೋಟಿ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಜಿಲ್ಲಾ ಕಛೇರಿಗಳ ಸಂಕೀರ್ಣಕ್ಕೆ ಮುಖ್ಯ ಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು ಶಂಕು ಸ್ಥಾಪನೆ ನೆರವೇರಿಸುವರು.

ಇದೇ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಮೂಲಕ ಆಯ್ದ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಲಾಗುವುದಲ್ಲದೆ 38 ಕೋಟಿ ವೆಚ್ಚದಲ್ಲಿ ಅನುಷ್ಠಾನಗೊಳಿಸಲಾಗಿರುವ 35 ಕಾಮಗಾರಿಗಳ ಉದ್ಘಾಟನೆ ಹಾಗೂ 121 ಕಾಮಗಾರಿಗಳಿಗೆ ಶಂಕು ಸ್ಥಾಪನೆ ನೆರವೇರಿಸಲಾಗುವುದು.

ಕಂದಾಯ ಸಚಿವ ವಿ. ಶ್ರೀನಿವಾಸ್ ಪ್ರಸಾದ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕೃಷಿ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ ಅವರ ಘನ ಉಪಸ್ಥಿತಿಯಲ್ಲಿ ನಡೆಯಲಿರುವ ಈ ಸಮಾರಂಭದ ಅಧ್ಯಕ್ಷತೆಯನ್ನು ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿಳ್ಳಮುನಿಶ್ಯಾಮಪ್ಪ ವಹಿಸುವರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ॥ ಎಂ ವೀರಪ್ಪಮೊಯ್ಲಿ ಅವರು ಜಿಲ್ಲಾ ಸಂಕೀರ್ಣ ವಿನ್ಯಾಸ ಆನಾವರಣ ಮಾಡುವರು.

ಈ ಕಾರ್ಯಕ್ರಮದಲ್ಲಿ ಗೃಹ ಸಚಿವರಾದ ಡಾ॥ ಜಿ. ಪರಮೇಶ್ವರ್, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಮತ್ತು ಪ್ರವಾಸೋದ್ಯಮ ಸಚಿವರಾದ ಆರ್.ವಿ. ದೇಶಪಾಂಡೆ, ಇಂಧನ ಸಚಿವರಾದ ಡಿ.ಕೆ. ಶಿವಕುಮಾರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಹೆಚ್.ಕೆ. ಪಾಟೀಲ್, ಬೆಂಗಳೂರು ಅಭಿವೃದ್ಧಿ ಸಚಿವರಾದ ಕೆ.ಜೆ.ಜಾರ್ಜ್, ಪೌರಾಡಳಿತ ಮತ್ತು ನಗರಾಭಿವೃದ್ಧಿ, ಸಾರ್ವಜನಿಕ ಉದ್ದಿಮೆ, ಹಜ್ ಮತ್ತು ವಕ್ಫ್, ಅಲ್ಪಸಂಖ್ಯಾತರ ಕಲ್ಯಾಣ ಸಚಿವರಾದ ಖಮರ್ ಉಲ್ ಇಸ್ಲಾಂ, ಅರಣ್ಯ ಸಚಿವರಾದ ರಮಾನಾಥ ರೈ, ಸಹಕಾರ ಮತ್ತು ಸಕ್ಕರೆ ಸಚಿವರಾದ ಹೆಚ್.ಸಿ. ಮಹದೇವ ಪ್ರಸಾದ್, ವಸತಿ ಸಚಿವರಾದ ಡಾ॥ ಎಂ.ಹೆಚ್. ಅಂಬರೀಷ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು.ಟಿ.ಖಾದರ್, ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರಾದ ಶ್ರೀಮತಿ ಉಮಾಶ್ರೀ, ರೇಷ್ಮೆ ಮತ್ತು ಪಶುಸಂಗೋಪನಾ ಸಚಿವರಾದ ಎ.ಮಂಜು, ಜಿಲ್ಲಾ ಪಂಚಾಯತ್ ಅಧ್ಯಕ್ಷರಾದ ವಿ.ಪ್ರಸಾದ್, ಶಾಸಕರುಗಳಾದ ಟಿ.ವೆಂಕಟರಮಣಯ್ಯ, ಎನ್. ನಾಗರಾಜ್ ಡಾ॥ ಕೆ. ಶ್ರೀನಿವಾಸ್‌ಮೂರ್ತಿ, ವಿಧಾನ ಪರಿಷತ್ ಸದಸ್ಯರುಗಳು ಹಾಗೂ ಇತರೆ ಗಣ್ಯರುಗಳು ಭಾಗವಹಿಸುವರು.